# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 373 |
| ಸದಸ್ಯರ ಹೆಸರು : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 07.07.2023 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಇಲಾಖೆಯ ಹಾಸ್ಟೆಲ್ ಗಳಾದ ದೀನ್‌ದಯಾಳ್, ನಾರಾಯಣಗುರು, ಮೊರಾರ್ಜಿ ದೇಸಾಯಿ, ಕಿತ್ತೂರುರಾಣಿ ಚೆನ್ನಮ್ಮ, ಇಂದಿರಾಗಾಂಧಿ ಇತ್ಯಾದಿ ವಸತಿ ನಿಲಯಗಳಲ್ಲಿ ಶಾಲೆಗಳು ನಡೆಯುತ್ತಿದ್ದು, ಈ ಸಂಸ್ಥೆಗಳ ಕಟ್ಟಡಗಳು 40 ವರ್ಷಗಳ ಹಳೆಯದಾಗಿದ್ದು, ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಟ್ಟಡಗಳನ್ನು ದುರಸ್ತಿಗೊಳಿಸಲು ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಹೌದು,<br><br>ಹಿಂದುಳಿದ ವರ್ಗಗಳ ಹಾಸ್ಟೆಲ್ ಗಳನ್ನು ದುರಸ್ತಿಗೊಳಿಸಲು 04 ನಾರಾಯಣಗುರು ವಸತಿ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ತಲಾ ರೂ.18.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಹೊಸ ಕಟ್ಟಡ ನಿರ್ಮಿಸಲು ಆಯವ್ಯಯದಲ್ಲಿ ಒದಗಿಸುವ ಅನುದಾನದನ್ವಯ ಕ್ರಮಕೈಗೊಳ್ಳಲಾಗುವುದು. |
| ಆ) | ಹಿಂದುಳಿದ ವರ್ಗಗಳ ಜನಾಂಗದವರ ಏಳಿಗೆಗಾಗಿ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳು ಯಾವುವು; ಇದುವರೆಗೆ ಯಾವುದೇ ಸವಲತ್ತು ಪಡೆಯದಿರುವ ಜನಾಂಗದವರನ್ನು ಗುರುತಿಸಿ ಸರ್ಕಾರದ ಸವಲತ್ತುಗಳನ್ನು ಪಡೆಯಲು ಅವರಿಗೆ ಅನುಕೂಲವಾಗುವಂತೆ ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು; | ಹಿಂದುಳಿದ ವರ್ಗಗಳ ಜನಾಂಗದವರ ಏಳಿಗೆಗಾಗಿ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳ ವಿವರಗಳು ಈ ಕೆಳಕಂಡಂತಿದೆ.<br>1. ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ಸಾಲ ಯೋಜನೆ.<br>2. ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>3. ಅರಿವು ಶೈಕ್ಷಣಿಕ ಸಾಲ ಯೋಜನೆ.<br>4. ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ.<br>5. ಹಿಂದುಳಿದ ವರ್ಗಗಳ ಮಹಿಳೆಯರಿಗೆ ಹೊಲಿಗೆ ಯಂತ್ರ ವಿತರಣೆ ಯೋಜನೆ.<br>6. ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ<br>7. ಬಸವ ಬೆಳಗು (ವೃತ್ತಿಪರ ಕೋರ್ಸ್‌ಗಳಿಗೆ ಆರ್ಥಿಕ ನೆರವು)<br>8. ವಿದೇಶ ವಿದ್ಯಾವಿಕಾಸ (ಮಾನ್ಯತೆ ಪಡೆದಿರುವಂತಹ ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವು)<br>9. ಪರಿಪೂರ್ಣದೆಡೆಗೆ (ಸಂಶೋಧನಾ ವ್ಯಾಸಂಗ ಮಾಡುವ ಅಭ್ಯರ್ಥಿಗಳಿಗೆ ಆರ್ಥಿಕ ನೆರವು)<br>10. ಜೀವಜಲ (ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸಲು ಆರ್ಥಿಕ ನೆರವು) |

| | | |
|---|---|---|
| | | 11. ಸ್ವಸಹಾಯ ಸಂಘಗಳಿಗೆ ಉತ್ತೇಜನ (ಸ್ವಸಹಾಯ ಸಂಘಗಳಿಗೆ ಸಾಲ ಮತ್ತು ಸಹಾಯಧನ)<br>12. ಕಾಯಕಕಿರಣ (ವೃತ್ತಿ ಕಸುಬುದಾರರು ಹಾಗೂ ಕುಶಲಕರ್ಮಿಗಳಿಗೆ ಸಾಲ ಮತ್ತು ಸಹಾಯಧನ)<br>13. ಶರಣ ಸೇನೆ (ಸೇನೆ ಹಾಗೂ ಸಿವಿಲ್ ಪೋಲಿಸ್ ಸೇವೆಗೆ ಸೇರಲು ಇಚ್ಛಿಸುವ ಅಭ್ಯರ್ಥಿಗಳಿಗೆ ತರಬೇತಿ)<br>14. ವಿಭೂತಿ ನಿರ್ಮಾಣ ಘಟಕ (ವಿಭೂತಿ ನಿರ್ಮಾಣ ಮಾಡಲು ಸಾಲ ಮತ್ತು ಸಹಾಯಧನ)<br>15. ಭೋಜನಾಲಯ ಕೇಂದ್ರ (ಸ್ವಂತ ಖಾನಾವಳಿ ಆರಂಭಿಸಲು ಸಾಲ ಮತ್ತು ಸಹಾಯಧನ)<br>16. ಸ್ವಯಂ ಉದ್ಯೋಗ ಸಾಲ ಯೋಜನೆ.<br>17. ಅರಿವು ಶೈಕ್ಷಣಿಕ ಸಾಲ ಯೋಜನೆ.<br>18. ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>19. ಅಮೃತ ಮುನ್ನಡೆ ಯೋಜನೆ.<br>20. ಸ್ವಯಂ ಉದ್ಯೋಗ ಸಾಲ ಯೋಜನೆ.<br>21. ಗಂಗಾ ಕಲ್ಯಾಣ ನೀರಾವರಿ ಯೋಜನೆ<br>22. ಟೂರಿಸ್ಟ್ ಟ್ಯಾಕ್ಸಿ/ಸರಕು ಸಾಗಾಣಿಕೆ ವಾಹನ ಕೊಳ್ಳಲು ಸಹಾಯಧನ ಯೋಜನೆ.<br>23. ಶೈಕ್ಷಣಿಕ ಸಾಲ ಯೋಜನೆ<br>24. ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಆರ್ಥಿಕ ನೆರವು<br>25. ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಯಡಿಯಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ.<br>ಇದುವರೆಗೆ ಯಾವುದೇ ಸವಲತ್ತು ಪಡೆಯದಿರುವ ಜನಾಂಗದವರನ್ನು ಗುರುತಿಸಿ ಸವಲತ್ತುಗಳನ್ನು ಪಡೆಯಲು ಅವರಿಗೆ ಅನುಕೂಲವಾಗುವಂತೆ ಇಲಾಖೆಯಿಂದ ದಿನಪತ್ರಿಕೆಗಳಲ್ಲಿ ಪತ್ರಿಕಾ ಪ್ರಕಟಣೆಯನ್ನು , ಜಿಲ್ಲಾ ಮಟ್ಟದ ಸ್ಥಳೀಯ ಪತ್ರಿಕೆಗಳಲ್ಲಿ ಸಹ ಪ್ರಕಟಣೆಯನ್ನು ಹೊರಡಿಸಿ, ವಿವಿಧ ಯೋಜನೆಗಳಲ್ಲಿ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತದೆ. |
| ಇ) | ಮುಂದಿನ 25 ವರ್ಷಗಳ ದೃಷ್ಟಿಕೋನ ಇಟ್ಟುಕೊಂಡು ಹಿಂದುಳಿದ ವರ್ಗದ ಜನಾಂಗದವರ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಮುಂದಾಲೋಚನಾ ಕ್ರಮಗಳಾವುವು? | ಹಿಂದುಳಿದ ವರ್ಗದ ಜನಾಂಗದವರ ಮುಂದಿನ 25 ವರ್ಷಗಳ ದೃಷ್ಟಿಕೋನ ಇಟ್ಟುಕೊಂಡು ಆರ್ಥಿಕವಾಗಿ ಸದೃಡಗೊಳಿಸಲು ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿ ಜೀವನ ಮಟ್ಟವನ್ನು ಸುಧಾರಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ**:ಹಿಂವಕ 307 ಬಿಂಎಂಎಸ್ 2023

**( ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ
ಮತ್ತು ಸಂಸ್ಕೃತಿ ಇಲಾಖೆ ಸಚಿವರು